**ಅಸಲು ದಾವಾ ಸಂಖ್ಯೆ-207/2021** **ಪಿ.ಡಬ್ಲ್ಯೂ:- 1**

ದಿನಾಂಕಃ **02-04-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಪಾಟೀ ಸವಾಲು:- ಪ್ರತಿವಾದಿ ಪರ ವಕೀಲರಿಂದ:-

ನಿಪಿ-1 ರ ಖರೀದಿದಾರರಾದ ಬಸಪ್ಪ ಬಿನ್ ಗಿರಿಯಜ್ಜಿ ಮಲ್ಲಪ್ಪ ನನ್ನ ಅಜ್ಜ ಅಲ್ಲ ಎಂದರೆ ಸರಿಯಲ್ಲ. ಬಸಪ್ಪ ಬಿನ್ ಗಿರಿಯಜ್ಜಿ ಮಲ್ಲಪ್ಪ ರವರು ನಮ್ಮ ಅಜ್ಜ ಎಂದು ತೋರಿಸಲು ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿರುವುದಿಲ್ಲ ಆದರೆ ಹಾಜರುಪಡಿಸುತ್ತೇನೆ ಎಂದು ನುಡಿಯುತ್ತಾರೆ. ಬಸಪ್ಪ ಬಿನ್ ಗಿರಿಯಜ್ಜಿ ಮಲ್ಲಪ್ಪರವರು ನಮ್ಮ ಅಜ್ಜ ಎಂದು ತೋರಿಸಲು ನಮ್ಮ ಬಳಿ ಯಾವುದೇ ದಾಖಲಾತಿಗಳು ಇರುವುದಿಲ್ಲ ಮತ್ತು ನಿಪಿ-1 ದಾಖಲಾತಿಯನ್ನು ಈ ದಾವೆಗೋಸ್ಕರ ನಾನು ಸೃಷ್ಟಿ ಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ. ವಾದಪತ್ರದಲ್ಲಾಗಲೀ ಅಥವಾ ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಾಗಲೀ ಬಸಪ್ಪ ಬಿನ್ ಗಿರಿಯಜ್ಜಿ ಮಲ್ಲಪ್ಪರವರ ವಾರಸುದಾರರು ಯಾರು ಯಾರು ಎಂಬುದನ್ನು ನಮೂದು ಮಾಡಿಲ್ಲ ಎಂದರೆ ಸರಿ. ನಿಪಿ-1 ದಾಖಲೆಯು 1956 ರ ದಾಖಲೆಯಾದ್ದರಿಂದ ಪ್ರಸ್ತುತ ದಾವೆಯು ಕಾಲಪರಿಮಿತಿ ಅಧಿನಿಯಮದ ಅಡಿಯಲ್ಲಿ ಭಾದಕವಾಗಿದೆ ಎಂದರೆ ಸರಿಯಲ್ಲ. ವಾದ ಪತ್ರದಲ್ಲಾಗಲೀ ಅಥವಾ ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಾಗಲೀ ದಾವೆಯನ್ನು ತಡವಾಗಿ ಸಲ್ಲಿಸಿದ ಬಗ್ಗೆ ಸಕಾರಣಗಳನ್ನು ನಮೂದು ಮಾಡಿಲ್ಲ ಎಂಬ ಪ್ರಶ್ನೆಗೆ ಸಾಕ್ಷಿಯು ನನಗೆ ಇತ್ತೀಚೆಗೆ ನಿಪಿ-1 ರ ದಾಖಲೆಯ ಬಗ್ಗೆ ತಿಳಿದ ನಂತರ ದಾವೆಯನ್ನು ಸಲ್ಲಿಸಿದ್ದೇನೆ ಎಂದು ನುಡಿಯುತ್ತಾರೆ. ಪ್ರತಿವಾದಿಗೆ ಸೇರಿದ ದಾವಾ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ದಾವೆಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿಯೇ ದಾವಾ ಆಸ್ತಿಯ ಮಾಲೀಕರೇ ಹೊರತು ನನಗೆ ದಾವಾ ಆಸ್ತಿಯ ಮೇಲೆ ಯಾವುದೇ ಹಕ್ಕು ಮತ್ತು

ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಯ ದಾವಾ ಆಸ್ತಿಯನ್ನು ಕಬಳಿಸುವ ಉದ್ದೇಶದಿಂದ ಸುಳ್ಳು ದಾವೆಯನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.